ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪಿಡಬ್ಲ್ಯುಡಿ (ಸಾರ್ವಜನಿಕ ಲೆಕ್ಕಪತ್ರ ಸಮಿತಿ)

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 14/12/2017

### ಲೋಕೋಪಯೋಗಿ ಇಲಾಖೆ ಸ್ಪಷ್ಟನೆ | ಸಾರ್ವಜನಿಕ ಲೆಕ್ಕಪತ್ರ ಸಮಿತಿ ಸೂಚನೆಗೆ ಪ್ರತಿಕ್ರಿಯೆ

# ಬಿಟಿಸಿ ವಿರುದ್ಧ ಕ್ರಮ ಅಸಾಧ್ಯವೆಂದ ಪಿಡಬ್ಲ್ಯುಡಿ

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರೇಸ್‌ಕೋರ್ಸ್ ಜಾಗವನ್ನು ಸರ್ಕಾರ ವಶಕ್ಕೆ ಪಡೆಯುವ ಸಂಬಂಧ ಸುಪ್ರೀಂ ಕೋರ್ಟ್‌ನಲ್ಲಿ ಪ್ರಕರಣ ದಾಖಲಾಗಿದೆ. ಆದ್ದರಿಂದ, ಯಾವುದೇ ವಿಚಾರದಲ್ಲಿ ಬೆಂಗಳೂರು ಟರ್ಫ್ ಕ್ಲಬ್‌ಗೆ (ಬಿಟಿಸಿ) ನೋಟಿಸ್ ನೀಡಲು ಸಾಧ್ಯವಿಲ್ಲ ಎಂದು ಸಾರ್ವಜನಿಕ ಲೆಕ್ಕಪತ್ರ ಸಮಿತಿಗೆ ಲೋಕೋಪಯೋಗಿ ಇಲಾಖೆ ಸ್ಪಷ್ಟಪಡಿಸಿದೆ.

ಬೆಂಗಳೂರು ಟರ್ಫ್ ಕ್ಲಬ್ ಅವಧಿ 2009ರ ಡಿ.31ಕ್ಕೆ ಅಂತ್ಯವಾಗಿತ್ತು. ನಂತರ 2010ರ ಜ.1ರಿಂದ ಕ್ಲಬ್‌ನ ಆದಾಯದ ಶೇ.2 ಮೊತ್ತವನ್ನು ವಾರ್ಷಿಕ ಬಾಡಿಗೆ ರೂಪದಲ್ಲಿ ಕೊಡುವಂತೆ ಸರ್ಕಾರ ಆದೇಶಿಸಿತ್ತು. ಅದರಂತೆ 2010-11ರಿಂದ 2017-18ರವರೆಗೆ ಕ್ಲಬ್‌ನಿಂದ 32.86 ಕೋಟಿ ರೂ. ಬಾಡಿಗೆ ಬಾಕಿಯಿದೆ. ಅದನ್ನು ವಸೂಲಿ ಮಾಡಲು ಕ್ರಮ ಕೈಗೊಳ್ಳುವಂತೆ ಸಮಿತಿಯು ಲೋಕೋಪಯೋಗಿ ಇಲಾಖೆಗೆ ಸೂಚಿಸಿತ್ತು.

ಅದಕ್ಕೆ ಉತ್ತರಿಸಿರುವ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು, ಟರ್ಫ್‌ಕ್ಲಬ್‌ಗೆ 1915ರಲ್ಲಿ 83.14 ಎಕರೆ ಜಾಗವನ್ನು ಗುತ್ತಿಗೆ ಆಧಾರದಲ್ಲಿ ನೀಡಲಾಗಿದೆ. ಗುತ್ತಿಗೆ ಅವಧಿ 2000ನೇ ಇಸವಿಯಲ್ಲಿ ಅಂತ್ಯವಾಗಿದೆ. ಬಳಿಕ ಅದನ್ನು ಪರಿಷ್ಕರಿಸಲಾಗಿದೆ. ಆದರೆ, 2008ರ ಸೆ.25ರಂದು ಸರ್ಕಾರ ಮತ್ತೊಂದು ಆದೇಶ ಹೊರಡಿಸಿತ್ತು. ಆದರಂತೆ 2010ರ ಡಿ.31ಕ್ಕೆ ಜಾಗದ ಗುತ್ತಿಗೆ ಅವಧಿ ಮುಕ್ತಾಯವಾಗಿದೆ. ಇದಾದ ನಂತರ ರೇಸ್‌ಕೋರ್ಸ್ ಜಾಗವನ್ನು ವಶಕ್ಕೆ ಪಡೆಯಲು ಸರ್ಕಾರ ಮುಂದಾಗಿತ್ತು.

**ಕ್ರಮಕ್ಕೆ ಸೂಚನೆ:** ಟರ್ಫ್ ಕ್ಲಬ್‌ನಲ್ಲಿ ನಡೆಯುವ ಜೂಜು ಅಥವಾ ರೇಸ್ ಚಟುವಟಿಕೆಯನ್ನು 2019ರ ಡಿ.2ರಿಂದ ಸ್ಥಗಿತಗೊಳಿಸಲು ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯದರ್ಶಿಗೆ ಲೆಕ್ಕ ಪರಿಶೋಧನಾ ಸಮಿತಿ ಸೂಚಿಸಿತ್ತು. ಅದಕ್ಕೆ ಉತ್ತರಿಸಿರುವ ಲೋಕೋಪಯೋಗಿ ಇಲಾಖೆ, ಟರ್ಫ್‌ಕ್ಲಬ್ ಜಮೀನನ್ನು ಲೋಕೋಪಯೋಗಿ ಇಲಾಖೆ ನೀಡಿದೆ. ಆದರೆ, ರೇಸ್ ಚಟುವಟಿಕೆಗಳಿಗೆ ಆರ್ಥಿಕ ಇಲಾಖೆ ಅನುಮತಿ ನೀಡಿದೆ.

## ತ್ವರಿತ ವಿಚಾರಣೆಗೆ ಕ್ರಮ

ರೇಸ್‌ಕೋರ್ಸ್ ಜಾಗವನ್ನು ವಶಕ್ಕೆ ಪಡೆಯುವ ಸರ್ಕಾರದ ಆದೇಶವನ್ನು ಒಪ್ಪದ ಟರ್ಫ್‌ಕ್ಲಬ್ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿತ್ತು. ಅರ್ಜಿ ವಿಚಾರಣೆ ಆರಂಭಿಸಿರುವ ಸುಪ್ರೀಂಕೋರ್ಟ್ ಮುಂದಿನ ಆದೇಶದವರೆಗೆ ಯಥಾಸ್ಥಿತಿ ಕಾಯ್ದುಕೊಳ್ಳಲು ಸೂಚಿಸಿದೆ. ಹೀಗಾಗಿ ಸುಪ್ರೀಂ ಕೋರ್ಟ್‌ನಲ್ಲಿ ಪ್ರಕರಣ ಇತ್ಯರ್ಥವಾಗದ ಹೊರತು ಟರ್ಫ್ ಕ್ಲಬ್ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲು ಸಾಧ್ಯವಿಲ್ಲ ಎಂದು ಅಡ್ವೊಕೇಟ್ ಜನರಲ್ ಕೂಡ ಅಭಿಪ್ರಾಯಪಟ್ಟಿದ್ದಾರೆ. ಆದ್ದರಿಂದ, ಬಾಕಿ ವಸೂಲಿಗೆ ನೋಟಿಸ್ ನೀಡುವುದು ಸೇರಿ ಟರ್ಫ್ ಕ್ಲಬ್ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲಾಗದು. ಆದರೆ, ಸುಪ್ರೀಂಕೋರ್ಟ್ ವಿಚಾರಣೆ ತ್ವರಿತವಾಗಿ ನಡೆದು, ಪ್ರಕರಣ ಇತ್ಯರ್ಥವಾಗುವಂತೆ ಮಾಡುವುದಾಗಿ ಲೋಕೋಪಯೋಗಿ ಇಲಾಖೆ ಸ್ಪಷ್ಟಪಡಿಸಿದೆ.